ಪಿ.ಡಬ್ಲ್ಯೂ- 2

**ದಿನಾಂಕಃ 03-02-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಶ್ರೀ ಜೆ.ಎಂ.ಎ., ಅರ್ಜಿದಾರರ ಪರ ವಕೀಲರಿಂದಃ**

ನಾನು ಈ ಪ್ರಕರಣದಲ್ಲಿ ಸಾಕ್ಷಿದಾರನಾಗಿದ್ದು, ನ್ಯಾಯಾಲಯದಲ್ಲಿ ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದೇನೆ. ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿವೆ ಹಾಗೂ ಅದರಲ್ಲಿರುವ ಸಹಿಗಳು ನನ್ನವೇ ಆಗಿರುತ್ತವೆ.

ಸಾಕ್ಷಿಗೆ ನಿಪಿ-24 ನ್ನು ತೋರಿಸಲಾಗಿ ಸಾಕ್ಷಿಯು ಸದ್ರಿ ದಾಖಲೆಯಲ್ಲಿ ತನ್ನ ಸಹಿ ಇದೆ ಎಂದು ಗುರುತಿಸಿದ್ದು, ಸದ್ರಿ ಅಂಗನ್ಯೂನ್ಯತೆ ಪ್ರಮಾಣ ಪತ್ರವನ್ನು ನಾನು ನೀಡಿರುವುದಾಗಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-24(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಶ್ರೀ ಪಿ.ಎಸ್.ಹೆಚ್. 2 ನೇ ಎದುರುದಾರರ ಪರ ವಕೀಲರಿಂದಃ**

1. ಅಪಘಾತವಾದ ತಕ್ಷಣ ಅರ್ಜಿದಾರರಿಗೆ ನಾನು ಚಿಕಿತ್ಸೆಯನ್ನು ನೀಡಿಲ್ಲ ಎಂದರೆ ಸರಿ. ಗಾಯದ ಪ್ರಮಾಣ ಪತ್ರದಲ್ಲಿ ನಮೂದಿಸಿರುವ ಗಾಯಗಳು ಅರ್ಜಿದಾರರಿಗೆ ಅಪಘಾತದಿಂದ ಆದಂತಹ ಗಾಯಗಳು ಅಲ್ಲ ಎಂದರೆ ಸಾಕ್ಷಿಯು ಅಪಘಾತದಿಂದ ಆದಂತಹ ಗಾಯಗಳೆಂದು ನಮೂದಿರುತ್ತದೆ ಎಂದು ನುಡಿಯುತ್ತಾರೆ. ಅರ್ಜಿದಾರರಿಗೆ ನಾನು ಅಂಗನ್ಯೂನ್ಯತೆ ಪ್ರಮಾಣ ಪತ್ರವನ್ನು ನೀಡಿರುತ್ತೇನೆ ಎಂದರೆ ಸರಿ. ನಾನು ಅಂಗನ್ಯೂನ್ಯತೆ ಪ್ರಮಾಣ ಪತ್ರವನ್ನು ಅರ್ಜಿದಾರರಿಗೆ ನೀಡುವಾಗ ಅವರನ್ನು ದೈಹಿಕ ಪರೀಕ್ಷೆ ಮಾಡಿ ಮತ್ತು ಎಕ್ಸ-ರೇಯನ್ನು ಪರಿಶೀಲಿಸಿ ಅಂಗನ್ಯೂನ್ಯತೆ ಪ್ರಮಾಣ ಪತ್ರವನ್ನು ನೀಡಿರುತ್ತೇನೆ. ರೆಡಿಯೋಲಜಿಸ್ಟರವರ ಅಭಿಪ್ರಾಯವನ್ನು ಪಡೆದಿಲ್ಲ. ಸದ್ರಿಯವರ ಅಭಿಪ್ರಾಯ ವರದಿ ಇಲ್ಲದೇ ಅಂಗನ್ಯೂನ್ಯತೆ ಪ್ರಮಾಣ ಪತ್ರ ನೀಡಲು ಬರುವುದಿಲ್ಲ ಎಂದರೆ ಸರಿಯಲ್ಲ.

2. History of illness ಮತ್ತು Clinical Examination ಯಾವುದು ನಾನು ಮಾಡಿಯೇ ಇಲ್ಲ ಎಂದರೆ ಸರಿಯಲ್ಲ. ನಿಪಿ-24 ರ ಅಂಗನ್ಯೂನ್ಯತೆ ಪ್ರಮಾಣ ಪತ್ರದಲ್ಲಿ ನಮೂದಿಸಿರುವುದು ಶೇಕಡಾ 22 ಅಂಗನ್ಯೂನ್ಯತೆ ಸಂಪೂರ್ಣ ದೇಹಕ್ಕಲ್ಲ ಎಂದರೆ ಸರಿ. ಸಂಪೂರ್ಣ ದೇಹಕ್ಕೆ ಹೋಲಿಸಿದರೆ ಶೇಕಡಾ 22 ರ ಮೇಲೆ 1/3 ಅಂಶ ಬರುತ್ತದೆ. Movement of Left wrist ನಮೂದಿಸಿರುವುದು ಸುಳ್ಳು ಇರುತ್ತದೆ ಎಂದರೆ

ಸರಿಯಲ್ಲ. ಸಂಪೂರ್ಣ ದೇಹಕ್ಕೆ ಶೇಕಡಾ 22 ರ ಅಂಗನ್ಯೂನತೆಯನ್ನು ಹೋಲಿಸಿದರೆ 1/3 ಅಂಶ ಬರುವುದಿಲ್ಲ ಕೇವಲ ಶೇಕಡಾ 2 ರಿಂದ 3 ರಷ್ಟು ಬರುತ್ತದೆ ಎಂದರೆ ಸರಿಯಲ್ಲ. ಅಂಗನ್ಯೂನ್ಯತೆ ಪ್ರಮಾಣ ವೈದರಿಂದ ವೈದ್ಯರಿಗೆ ವ್ಯತ್ಯಾಸ ಇರುತ್ತದೆ ಎಂದರೆ ಸರಿ. ಅರ್ಜಿದಾರನಿಗೆ ಯಾವುದೇ ಅಂಗನ್ಯೂನ್ಯತೆ ಇಲ್ಲದೇ ಇದ್ದರೂ ಸಹ ಆತನಿಗೆ ಸಹಾಯ ಮಾಡುವ ಉದ್ದೇಶದಿಂದ ಹೆಚ್ಚಿನ ಅಂಗನ್ಯೂನ್ಯತೆ ತೋರಿಸಿ ಅಂಗನ್ಯೂನ್ಯತೆ ಪ್ರಮಾಣ ಪತ್ರವನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ - ಇಲ್ಲ .

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ.)

ಓ ಹೇ ಕೇ ಸರಿ ಇದೆ.

–ಸಹಿ–

1 ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ. ಹಾವೇರಿ.